# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

### ಗುರುವಾರ, ದಿನಾಂಕ: 10ನೇ ಡಿಸೆಂಬರ್, 2020

### (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) **ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2019ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ **ಆರ್ಥಿಕ ಮತ್ತು ರಾಜಸ್ವ ವಲಯದ** ಮೇಲಿನ ವರದಿಯನ್ನು **(ಸಂಖ್ಯೆ–4)** ಸಭೆಯ ಮುಂದಿಡುವುದು.

ಆ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.

ಇ) **ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಧನವಿನಿಯೋಗ (ಸಂಖ್ಯೆ.4) ವಿಧೇಯಕ, 2020

02. ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ, 2020

03. ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕ, 2020

04. ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 2020

05. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2020

## 02. ವಿತ್ತೀಯ ಕಾರ್ಯಕಲಾಪ

**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)**

2020–21ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿಯನ್ನು ಒಪ್ಪಿಸುವುದು.

## 03. ವರದಿಯನ್ನೊಪ್ಪಿಸುವುದು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ (ಸದಸ್ಯರು, ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ)** ಅವರು 2019-20ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 36ನೇ ವರದಿಯನ್ನೊಪ್ಪಿಸುವುದು.

## 04. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರು;-

ಅ) ಬಳ್ಳಾರಿ ಜಿಲ್ಲೆ ಸಂಡೂರು ಹೋಬಳಿಯ ಎಮ್ಮಿಹಟ್ಟಿ ಗ್ರಾಮದ ಸರ್ವೇ ನಂಬರ್ 13/2 ರಿಂದ 43/ಸಿ ವರೆಗಿನ ಜಮೀನುಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

ಆ) ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ರಟ್ಟಾಡಿ, ಹೊರೊಳ್ಳಿಜೆಡ್ಡು, ಮಾವಿನಕೊಡ್ಲ, ಹಣೆಜೆಡ್ಡು, ಕೆಮ್ಮುಗುಡ್ಡೆ ಎಸ್.ಸಿ. ಕಾಲೋನಿಯ ರಸ್ತೆ ಮತ್ತು ಸೇತುವೆಗಳನ್ನು ಕಾಂಕ್ರೀಟ್‌ಕರಣ ಮಾಡಲು ಅರಣ್ಯ ಅಧಿಕಾರಿಗಳ ತಡೆ ಆಜ್ಞೆಯನ್ನು ತೆರವುಗೊಳಿಸಿ ಅನುಮತಿ ನೀಡುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

## 05. ಶಾಸನ ರಚನೆ

<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>

01. **ಕರ್ನಾಟಕ ಧನವಿನಿಯೋಗ (ಸಂಖ್ಯೆ.4) ವಿಧೇಯಕ, 2020**

**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ.4) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. **ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ, 2020**
**ಶ್ರೀ ಪ್ರಭು ಬಿ ಚೌಹಾನ್ ( ಪಶು ಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

...3/..

03. **ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕ, 2020**

ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. **ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 2020**

**ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. **ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2020**

**ಡಾ. ಅಶ್ವಥ ನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿ ಮತ್ತು ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>**ಎಸ್.ಆರ್.ಪಾಟೀಲ್, ಮಾನ್ಯ ವಿ.ಪ.ನಾ**<br>**ಎಂ.ನಾರಾಯಣಸ್ವಾಮಿ, ಮಾನ್ಯ ವಿ.ಪ.ಮು.ಸ**<br>**ಅಲ್ಲಂ ವೀರಭದ್ರಪ್ಪ, ಆರ್.ಬಿ.ತಿಮ್ಮಾಪುರ ಹಾಗೂ ಇತರರುಗಳು** | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಅತಿವೃಷ್ಠಿಯಿಂದಾಗಿ ಸಾರ್ವಜನಿಕ ಆಸ್ತಿಪಾಸ್ತಿಗಳು ಹಾಗೂ ಪ್ರಾಣ ಹಾನಿಯಾಗಿದ್ದು ಸರ್ಕಾರವು ಪರಿಹಾರ ಕಾರ್ಯಗಳನ್ನು ಕೈಗೊಳ್ಳದಿರುವ ಬಗ್ಗೆ. |

...4/..

## 07. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಹೊಸ ಶಿಕ್ಷಣ ನೀತಿ ಬಗ್ಗೆ ದಿನಾಂಕ:07.12.2020ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:07 (60+62)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಬಿ. ಕೆ. ಹರಿಪ್ರಸಾದ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ

## 09. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಮರಿತಿಬ್ಬೇಗೌಡ** ಅವರು ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದಾಗಿ ಅನುದಾನ ರಹಿತ ಶಾಲಾ ಕಾಲೇಜುಗಳು, ಪಾಲಿಟೆಕ್ನಿಕ್ ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರನ್ನು ಪ್ರತಿನಿಯೋಜನೆ ನಿಯಮಾವಳಿಗೆ ವಿರುದ್ಧವಾಗಿ ಕಳೆದ 9 ವರ್ಷಗಳಿಂದ ಮುಂದುವರೆಸಿಕೊಂಡು ಬಂದಿರುವುದರಿಂದ ಸಂಸ್ಥೆಯ ಗುಣಮಟ್ಟ ಕುಂಠಿತವಾಗಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 10. ನಿಯಮ 330ರ ಮೇರೆಗೆ

೦1. **ಶ್ರೀ ಕೆ.ಟಿ. ಶ್ರೀಕಂಠೇಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ನಿವೃತ್ತಿ/ ರಾಜೀನಾಮೆ/ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳ ಭರ್ತಿ ಹಾಗೂ 1986ರಿಂದ 1995ನೇ ಸಾಲಿನವರೆಗೆ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯು ಕೋವಿಡ್-19ರ ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಸಾಧ್ಯವಿಲ್ಲವೆಂದು ಆದೇಶಿಸಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಮಾನ್ಯ ಸರ್ಕಾರಿ ಮುಖ್ಯ ಸಚೇತಕರು)** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದಲ್ಲಿ ವಾಸಿಸುತ್ತಿರುವ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**